ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೦೭**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತಾರನೆಯ ಅಧಿವೇಶನ**

**ಬುಧವಾರ, ದಿನಾಂಕ: ೧೭ನೇ ಡಿಸೆಂಬರ್, ೨೦೧೪**

---

**ಸಮೂಹ – III**

೧. ಅರಣ್ಯ ಸಚಿವರು
೨. ಕಂದಾಯ ಸಚಿವರು
೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು
೪. ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು
೫. ಸಣ್ಣ ನೀರಾವರಿ ಸಚಿವರು
೬. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು
೭. ಕಾರ್ಮಿಕ ರಾಜ್ಯ ಸಚಿವರು

---

## SCVT ಪರೀಕ್ಷೆಯಲ್ಲಿ, ತರಬೇತಿ ಪಡೆಯದ ಅಭ್ಯರ್ಥಿಗಳು

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೯೧ (೧೧೩೨) ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ನವಂಬರ್ ೨೦೧೩ನೇ ಸಾಲಿನಲ್ಲಿ ನಡೆದ SCVT ಪರೀಕ್ಷೆಯಲ್ಲಿ, ತರಬೇತಿ ಅಪೂರ್ಣಗೊಂಡ ಮತ್ತು ತರಬೇತಿ ಪಡೆಯದ ಅಭ್ಯರ್ಥಿಗಳಿಗೆ ನೇರವಾಗಿ ಪ್ರವೇಶ ಪತ್ರಗಳನ್ನು ವಿತರಿಸಿ ಪರೀಕ್ಷೆಯಲ್ಲಿ ಇಲಾಖೆಯ ಅಧಿಕಾರಗಳೇ ಅವ್ಯವಹಾರ ನಡೆಸಿರುವ ವಿಷಯದ ಬಗ್ಗೆ ವಿಚಾರಣೆ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ವಿಚಾರಣಾ ಹಂತದ ವರದಿಯ ಪ್ರತಿಯನ್ನು ಒದಗಿಸುವುದು ;

(ಆ) ಪರೀಕ್ಷಾ ಫಲಿತಾಂಶ ಪ್ರಕಟವಾದರೂ ಸಹ ಉತ್ತೀರ್ಣರಾದ ಅಭ್ಯರ್ಥಿಗಳ ಅಂಕ ಪಟ್ಟಿಗಳನ್ನು ವಿತರಿಸದೇ ತಡೆಹಿಡಿದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ? (ಹಾಗಿದ್ದಲ್ಲಿ, ಕಾರಣ ಕುರಿತು ಮಾಹಿತಿ ಮತ್ತು ಕೈಗೊಂಡ ಕ್ರಮದ ಬಗ್ಗೆ ವಿವರಗಳನ್ನು ಒದಗಿಸುವುದು)

## ಜವಳಿ ಪಾರ್ಕ್‌ಗಳು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೨ (೯೯೩) ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಜವಳಿ ಪಾರ್ಕ್‌ಗಳೆಷ್ಟು ; ಅವುಗಳಿಗೆ ಒದಗಿಸಿರುವ ಮೂಲಭೂತ ಸೌಕರ್ಯಗಳೇನು ; ಜವಳಿ ಪಾರ್ಕ್‌ಗಳಿಂದ ನೇಕಾರರಿಗೆ ದೊರೆಯುವ ಅನುಕೂಲತೆಗಳೇನು ;

(ಆ) ರಾಜ್ಯದಲ್ಲಿ ಹೊಸ ಜವಳಿ ಪಾರ್ಕ್‌ಗಳ ಸ್ಥಾಪನೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ ಅದಕ್ಕಾಗಿ ಆಯ್ಕೆಮಾಡಿಕೊಂಡ ಸ್ಥಳಗಳಾವುವು ?

## ಒತ್ತುವರಿಯಾಗಿರುವ ಕೆರೆಗಳು

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೩ (೧೦೦೫) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾಂ ಜಿಲ್ಲೆಯಲ್ಲಿ ಕೆರೆಗಳ ಸರ್ವೆ ನಡೆಸಲಾಗಿದೆಯೇ ; ಸರ್ವೆ ನಡೆಸಿದ್ದು ಯಾವಾಗ ; ಸರ್ವೆ ಪ್ರಕಾರ ಜಿಲ್ಲೆಯಲ್ಲಿರುವ ಒಟ್ಟು ಕೆರೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಪೈಕಿ ಒತ್ತುವರಿಯಾಗಿರುವ ಕೆರೆಗಳ ಸಂಖ್ಯೆ ಎಷ್ಟು ; ಅವು ಯಾವುವು; ಒತ್ತುವರಿಯಾಗಿರುವ ವಿಸ್ತೀರ್ಣ ಎಷ್ಟು ;

(ಇ) ಒತ್ತುವರಿಯಾಗಿರುವ ಕೆರೆಗಳ ಪೈಕಿ ಸರ್ಕಾರ ಒತ್ತುವರಿ ತೆರವುಗೊಳಿಸಿರುವ ಕೆರೆಗಳು ಎಷ್ಟು ;

(ಈ) ಕೆರೆಗಳನ್ನು ಒತ್ತುವರಿ ಮಾಡಿಕೊಂಡಿರುವವರ ವಿವರ ನೀಡುವುದು ; ಇವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ? (ಸಂಸ್ಥೆಗಳ, ಸಾರ್ವಜನಿಕರ ತಾಲ್ಲೂಕುವಾರು ಪ್ರತ್ಯೇಕ ವಿವರ ನೀಡುವುದು)

## ಪ್ಲಾಸ್ಟಿಕ್ ಬಳಕೆ ನಿಷೇಧ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೯೪ (೧೦೩೬) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಯಾವ ರೀತಿಯ ಪ್ಲಾಸ್ಟಿಕ್ ಬಳಕೆ ನಿಷೇಧ ಇದೆ ; (ವಿವರಗಳೊಂದಿಗೆ)

(ಆ) ಪ್ಲಾಸ್ಟಿಕ್ ಬಳಕೆಯಿಂದ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಪ್ಲಾಸ್ಟಿಕ್ ತಯಾರಿಕೆ ಸಮಯದಲ್ಲೇ ನಿಷೇಧಿತ ಪ್ಲಾಸ್ಟಿಕ್‌ಗಳನ್ನು ತಯಾರು ಮಾಡದ ಹಾಗೆ ಸರ್ಕಾರ ಕಾನೂನು ರೂಪಿಸುತ್ತದೆಯೇ ?

## ಉತ್ತರ ಕರ್ನಾಟಕದ ಕ್ರೀಡೆಗಳು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೯೫ (೧೦೪೭) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉತ್ತರ ಕರ್ನಾಟಕ ಮತ್ತು ಹೈದರಾಬಾದ್–ಕರ್ನಾಟಕ ಜಿಲ್ಲೆಗಳಲ್ಲಿ, ಕ್ರೀಡೆಗಳನ್ನು ವೃದ್ಧಿಗೊಳಿಸಲು, ಕ್ರೀಡಾಪಟುಗಳನ್ನು ಉತ್ತೇಜಿಸಲು, ಪ್ರೋತ್ಸಾಹಿಸಲು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮಾಡುತ್ತಿರುವ ಕೆಲಸಗಳ ವಿವರಗಳನ್ನು ನೀಡುವುದು ;

(ಆ) ಈ ಜಿಲ್ಲೆಗಳಲ್ಲಿ ಕ್ರೀಡಾಂಗಣಗಳು ಮತ್ತು ಕ್ರೀಡಾ ಚಟುವಟಿಕೆಗಳಿಗೆ ಸಂಬಂಧಿಸಿದ ಕೇಂದ್ರಗಳು/ತಾಣಗಳು ಎಷ್ಟಿವೆ ; (ಜಿಲ್ಲಾವಾರು ವಿವರಗಳನ್ನು ನೀಡುವುದು);

(ಇ) ಈ ಭಾಗದಲ್ಲಿರುವ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಕ್ರೀಡಾಪಟುಗಳ ಮಾಹಿತಿ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಕ್ರೀಡಾವಾರು ವಿವರ ನೀಡುವುದು;

(ಈ) ಈ ಜಿಲ್ಲೆಯಲ್ಲಿ ಮತ್ತಷ್ಟು ಕ್ರೀಡಾ ಚಟುವಟಿಕೆಗಳನ್ನು ಹೆಚ್ಚಿಸಲು ಮತ್ತು ಕ್ರೀಡಾಪಟುಗಳನ್ನು ಹುಟ್ಟು ಹಾಕಲು ಸರ್ಕಾರ ಯಾವ ಕಾರ್ಯಕ್ರಮಗಳನ್ನು ರೂಪಿಸಿದೆ ?

## ನಾಲೆಗಳ ಆಧುನೀಕರಣದ ವೆಚ್ಚ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೯೬ (೯೯೯) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ನೀರಾವರಿ ನಿಗಮದ ವತಿಯಿಂದ ಕಳೆದ ೨ ವರ್ಷಗಳ ಅವಧಿಯಲ್ಲಿ ನಾಲೆಗಳ ಆಧುನೀಕರಣಕ್ಕಾಗಿ ಎಷ್ಟು ಮೊತ್ತ ವ್ಯಯಿಸಲಾಗಿದೆ, ಅದರ ಸಂಪೂರ್ಣ ವಿವರ ನೀಡುವುದು ;

(ಆ) ಆಧುನೀಕರಣದಲ್ಲಿ ತೊಡಗಿದ ಸಂಸ್ಥೆಗಳ ಸಂಖ್ಯೆಗಳೆಷ್ಟು, ಸಂಸ್ಥೆಗಳ ಹೆಸರು ಮತ್ತು ಜಿಲ್ಲಾವಾರು ವಿವರ ನೀಡುವುದು ? (ಟೆಂಡರ್ ಕರೆದ ದಿನಾಂಕ, ವಿಸ್ತೀರ್ಣ ಮತ್ತು ಕಾಮಗಾರಿಯ ಪ್ರಗತಿ ಅಥವಾ ಪೂರ್ಣಗೊಂಡಿದ್ದಲ್ಲಿ ಅದರ ವಿವರ ನೀಡುವುದು)

## ಕ್ರೀಡಾಂಗಣ ಮತ್ತು ಕ್ರೀಡಾ ವಸತಿ ನಿಲಯ

**ಶ್ರೀ ಎನ್.ಎಸ್. ಭೋಸರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೯೭ (೧೦೮೬) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ನಗರದಲ್ಲಿ ಕ್ರೀಡಾಂಗಣ ನಿರ್ಮಿಸುವ ಪ್ರಸ್ತಾವನೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಕ್ರೀಡಾಂಗಣ ಪುನರ್ ನಿರ್ಮಾಣ ಮಾಡಲು ಆಯವ್ಯಯದಲ್ಲಿ ಎಷ್ಟು ಅನುದಾನವನ್ನು ಮೀಸಲಿಡಲಾಗಿದೆ ;

(ಇ) ಹಿಂದುಳಿದ ಪ್ರದೇಶವಾದ ರಾಯಚೂರಿನಲ್ಲಿ ಕ್ರೀಡಾ ವಸತಿ ನಿಲಯವನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ಎಂದು, ಯಾವಾಗ ಪ್ರಾರಂಭಿಸಲಾಗುವುದು ? (ಪೂರ್ಣ ವಿವರ ಒದಗಿಸುವುದು)

## ಅಸಂಘಟಿತ ಮತ್ತು ಸಂಘಟಿತ ಕಾರ್ಮಿಕರ ಕಲ್ಯಾಣ ಯೋಜನೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) –**

೯೮ (೧೩೭) ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ರಾಷ್ಟ್ರೀಯ ಸ್ವಾಸ್ಥ್ಯ ಭಿಮಾ ಯೋಜನೆಯಡಿ ಕಾರ್ಮಿಕರನ್ನು ಸದಸ್ಯರಾಗಿ ನೋಂದಾವಣೆ ಮಾಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಈ

ಯೋಜನೆ ಪ್ರಾರಂಭವಾದಾಗಿನಿಂದ ನೋಂದಾಣಿಯಾಗಿರುವ ಸದಸ್ಯರ ಸಂಖ್ಯೆ ಎಷ್ಟು; (ವರ್ಷಾವಾರು, ಜಿಲ್ಲಾವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಈ ಯೋಜನೆ ಜಾರಿಯಿಂದ ರಾಜ್ಯದ ಎಷ್ಟು ಕಾರ್ಮಿಕರಿಗೆ, ಯಾವ ರೀತಿಯ ಸವಲತ್ತುಗಳನ್ನು ಒದಗಿಸಲಾಗಿದೆ ; (ಸಂಪೂರ್ಣ ವಿವರ ಒದಗಿಸುವುದು)

(ಇ) ರಾಜ್ಯದ ಅಸಂಘಟಿತ ಕೂಲಿ ಕಾರ್ಮಿಕರಿಗೆ ಒದಗಿಸಿರುವ ಸವಲತ್ತುಗಳು ಯಾವುವು ? (ವಿವರ ಒದಗಿಸುವುದು)

## ಅರಣ್ಯ ಪ್ರದೇಶಗಳಲ್ಲಿ ನಡೆಯುತ್ತಿರುವ ಚಟುವಟಿಕೆಗಳು

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೯ (೧೧೦೪) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಅರಣ್ಯ ಪ್ರದೇಶಗಳ ಜಾಗಗಳನ್ನು ಅತಿಕ್ರಮವಾಗಿ ಆಕ್ರಮಿಸಿಕೊಂಡು ನಿವೇಶನ ಹಾಗೂ ವಾಣಿಜ್ಯ ಚಟುವಟಿಕೆಗಳನ್ನು ಅನಧಿಕೃತವಾಗಿ ಈ ಪ್ರದೇಶಗಳಲ್ಲಿ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಕಳೆದ ೦೩ ವರ್ಷಗಳಿಂದ ಅನಧಿಕೃತ ಚಟುವಟಿಕೆಗಳು ಹಾಗೂ ಅಕ್ರಮ ಒತ್ತುವರಿ ಪ್ರದೇಶಗಳನ್ನು ಗುರುತಿಸಿ ಸರ್ಕಾರದ ವಶಕ್ಕೆ ಪಡೆದುಕೊಂಡಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಈ ರೀತಿಯ ಅಕ್ರಮ ಚಟುವಟಿಕೆಗಳಲ್ಲಿ ಭಾಗಿಯಾಗಿರುವವರ ವಿರುದ್ಧ ಸರ್ಕಾರದ ಕ್ರಮಗಳೇನು ?

## ಸತ್ತೆಗಾಲದ ಬಳಿ ನದಿ ದಾಟಲು ದೋಣಿ ವ್ಯವಸ್ಥೆ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೦ (೧೩೬) ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ –

ಮಳವಳ್ಳಿ ತಾಲ್ಲೂಕು, ಸತ್ತೆಗಾಲ ಸೇತುವೆಯ ಮೇಲೆ ವಾಹನ ಸಂಚಾರವನ್ನು ಸ್ಥಗಿತಗೊಳಿಸಿರುವುದರಿಂದ ಸಾರ್ವಜನಿಕರಿಗೆ, ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ನದಿಯನ್ನು ದಾಟಲು ೩–೪ ದೋಣಿಗಳ (ಮೋಟಾರ್ ಬೋಟ್) ವ್ಯವಸ್ಥೆ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಪೋಡಿ ಪ್ರಕರಣಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೧೦೧ (೧೦೬೦) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಬಾಕಿ ಇರುವ ಪೋಡಿ ಪ್ರಕರಣಗಳೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು) ಬಾಕಿ ಇರಲು ಕಾರಣಗಳೇನು ;

(ಆ) ತ್ವರಿತವಾಗಿ ಪೋಡಿ ಪ್ರಕರಣಗಳನ್ನು ಇತ್ಯರ್ಥಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಸರ್ಕಾರಿ ಮತ್ತು ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೨ (೧೦೮೫) ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಒಟ್ಟು ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಮತ್ತು ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳು (ಐ.ಟಿ.ಐ.) ಎಷ್ಟು ;

(ಆ) ಈ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಪಾಸಾದ ಯುವಕ–ಯುವತಿಯರಿಗೆ ರಾಜ್ಯದಲ್ಲಿ ಮತ್ತು ದೇಶದ ವಿವಿಧ ಭಾಗಗಳಲ್ಲಿ ಉದ್ಯೋಗಗಳು ಸಿಗುವ ವಿಚಾರದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ರಾಜ್ಯದಲ್ಲಿ ಒಟ್ಟು ಇಂತಹ ಉದ್ಯೋಗ ತರಬೇತಿ ಸಂಸ್ಥೆಗಳಿಂದ ತರಬೇತಿ ಪಡೆದ ನಂತರ ಇವರಿಗಾಗಿಯೇ ಉದ್ಯೋಗ ಮೇಳಗಳನ್ನು ನಡೆಸುವ ವಿಚಾರ ಸರ್ಕಾರದ ಮುಂದಿದೆಯೇ ; ಉದ್ಯೋಗ ಮೇಳಗಳನ್ನು ಆಯೋಜಿಸಿರುವ ಜಿಲ್ಲೆಗಳಲ್ಲಿ ಎಷ್ಟು ಯುವಕ–ಯುವತಿಯರಿಗೆ ಕಳೆದ ೨ ವರ್ಷಗಳಲ್ಲಿ (೨೦೧೨–೧೩, ೨೦೧೩–೧೪) ಉದ್ಯೋಗ ಅವಕಾಶ ಕಲ್ಪಿಸಿ ಆದೇಶ ನೀಡಲಾಗಿದೆ ;

(ಈ) ಎಷ್ಟು ಜನ ಇಂತಹ ಉದ್ಯೋಗಗಳಲ್ಲಿ ಹಾಜರಾಗಿದ್ದಾರೆ ?

## ಚಂದ್ರಶೇಖರ ಪಾಟೀಲ ಕ್ರೀಡಾಂಗಣ ಆಧುನೀಕರಣ

**ಶ್ರೀ ಅಮರನಾಥ ಪಾಟೀಲ (ಪದವೀಧರರ ಕ್ಷೇತ್ರ) –**

೧೦೩ (೧೦೦೧) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿ ನಗರದ ಚಂದ್ರಶೇಖರ ಪಾಟೀಲ ಕ್ರೀಡಾಂಗಣ ಆಧುನೀಕರಣ/ ನವೀಕರಣಕ್ಕಾಗಿ ಬಿಡುಗಡೆಯಾದ ಅನುದಾನ ಎಷ್ಟು ; ಯೋಜನಾವಾರು (ನಕಾಶೆಯೊಂದಿಗೆ) ಗುತ್ತಿಗೆದಾರರ ಮಾಹಿತಿ ಹಾಗೂ ಕಾಮಗಾರಿಯನ್ನು ಪೂರ್ಣಗೊಳಿಸುವ ಕಾಲಮಿತಿಯ ವಿವರ ನೀಡುವುದು ;

(ಆ) ಸದರಿ ಕಾಮಗಾರಿಯ ಪ್ರಗತಿ ಕುಂಠಿತಗೊಂಡಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ, ಇದ್ದಲ್ಲಿ, ಕಾರಣಗಳನ್ನು ನೀಡುವುದು ಹಾಗೂ ಈ ಕಾಮಗಾರಿಯ ಪ್ರಗತಿ ವಿವರ ನೀಡುವುದು ;

(ಇ) ಈ ಕ್ರೀಡಾಂಗಣದ ಮುಂಭಾಗದಲ್ಲಿರುವ ದಿವಂಗತ ಚಂದ್ರಶೇಖರ ಪಾಟೀಲ ರವರ ಪುತ್ಥಳಿ ಹಾಗೂ ಸ್ಥಳದ ನಿರ್ವಹಣೆ ಇಲ್ಲದಿರುವುದು ಸರ್ಕಾರದ ಗಮನದಲ್ಲಿ ಇದೆಯೇ, ಇದ್ದರೆ, ದಿವಂಗತ ಚಂದ್ರಶೇಖರ ಪಾಟೀಲ ರವರ ಪುತ್ಥಳಿಯ ಪೀಠದ ಮೇಲೆ ಅವರ ನಾಮಫಲಕ, ಜನ್ಮದಿನಾಂಕ ಲಿಂಗೈಕ್ಯ ದಿನಾಂಕ ಹಾಗೂ ಇತರೆ ಮಾಹಿತಿಗಳನ್ನು ಒಳಗೊಂಡ ಫಲಕವನ್ನು ಹಾಕಲು ಹಾಗೂ ಪುತ್ಥಳಿಯ ಸುತ್ತಮುತ್ತ ಉದ್ಯಾನವನ ನಿರ್ಮಿಸಲು ಸರ್ಕಾರವು ಕ್ರಮಕೈಗೊಳ್ಳಬಹುದೇ ? (ಮಾಹಿತಿ ನೀಡುವುದು)

## ಕೈಮಗ್ಗ ನೇಕಾರರಿಗೆ ಕನಿಷ್ಠ ವೇತನ, ಪಿಂಚಣಿ ಸೌಲಭ್ಯ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೪ (೧೯೬) ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಪ್ಪಳ ಜಿಲ್ಲೆಯಲ್ಲಿ ಇರುವ ಒಟ್ಟು ಕೈಮಗ್ಗ ನೇಕಾರರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇವರಿಗೆ ನೀಡಲಾಗುತ್ತಿರುವ ಕನಿಷ್ಠ ವೇತನ ಎಷ್ಟು ; ಇದನ್ನು ಹೆಚ್ಚಿಸುವ ಯೋಜನೆ ಸರ್ಕಾರದಲ್ಲಿದೆಯೇ ;

(ಇ) ರಾಜ್ಯದಲ್ಲಿನ ಎಲ್ಲಾ ಕೈಮಗ್ಗ ನೇಕಾರರಿಗೆ ಪಿಂಚಣಿಯನ್ನು ಮಂಜೂರು ಮಾಡುವ ವಿಚಾರ ಸರ್ಕಾರದ ಮಟ್ಟದಲ್ಲಿದೆಯೇ ;

(ಈ) ಕಾಲಕಾಲಕ್ಕೆ ಇವರಿಗೆ ಮಿತವ್ಯಯನಿಧಿ ಯೋಜನೆಯಡಿ ಅನುದಾನ ಮಂಜೂರು ಮಾಡಲಾಗುತ್ತಿದೆಯೇ, ಕೊಪ್ಪಳ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಮಿತವ್ಯಯನಿಧಿ ಯೋಜನೆಯಡಿ ಅನುದಾನ ಮಂಜೂರು ಮಾಡಲಾಗಿದೆಯೇ; ಅದನ್ನು ಸಂಬಂಧಪಟ್ಟ ಕೈಮಗ್ಗ ನೇಕಾರರಿಗೆ ಬಟವಾಡೆ ಮಾಡಲಾಗಿದೆಯೇ;

(ಉ) ಕೈಮಗ್ಗ ನೇಕಾರರನ್ನು ಆರ್ಥಿಕವಾಗಿ ಇನ್ನಷ್ಟು ಸದೃಢಗೊಳಿಸಲು ಸರ್ಕಾರ ಯಾವ ಯೋಜನೆಗಳನ್ನು ಹಾಕಿಕೊಂಡಿದೆ ?

## ಭೂನ್ಯಾಯ ಮಂಡಳಿಗಳಲ್ಲಿನ ನಕಲುಗಾರರ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೫ (೧೦೪೧) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **–**

(ಅ) ರಾಜ್ಯದ ಯಾವ ಯಾವ ತಾಲ್ಲೂಕುಗಳ ಭೂನ್ಯಾಯ ಮಂಡಳಿಗಳ ಶಾಖೆಯಲ್ಲಿ ನಕಲುಗಾರರು ಕಾರ್ಯನಿರ್ವಹಿಸುತ್ತಿದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನ ಭೂನ್ಯಾಯ ಮಂಡಳಿಯಲ್ಲಿ ನಕಲುಗಾರರಾಗಿ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; (ಹೆಸರು, ವಿಳಾಸ ಹಾಗೂ ಅವರು ಕಾರ್ಯನಿರ್ವಹಿಸುತ್ತಿರುವ ಅವಧಿಯೊಂದಿಗೆ ವಿವರ ನೀಡುವುದು)

(ಇ) ರಾಜ್ಯದ ವಿವಿಧ ಕಂದಾಯ ಇಲಾಖೆಯ ಕಛೇರಿಗಳಿಗೆ ಮಂಜೂರಾದ ಹುದ್ದೆಗಳೆಷ್ಟು ; ಕೊರತೆ ಇರುವ ಹುದ್ದೆಗಳೆಷ್ಟು ; ಈ ಕೊರತೆಯನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ7, ಕಾ.ಸೂ. 258, ಪ್ರತಿಗಳು 1000